**ಸನ್ಮಾನ್ಯ ಡಾ॥ ಶರಣ ಪ್ರಕಾಶ್ ಆರ್. ಪಾಟೀಲ್, ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ ರವರು ಮತ್ತು ರಶ್ಮಿ.ವಿ., ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ರವರು ದಿನಾಂಕ: 08.11.2013 ರಂದು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ಸಂಸ್ಥೆಯ ಪ್ರಗತಿ ಪರಿಶೀಲನೆ ಮಾಡಿದ ನಡವಳಿಗಳು.**

******

ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಮತ್ತು ಸರ್ಕಾರದ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ರವರು ದಿನಾಂಕ: 08.11.2013 ರಂದು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಬೇಟಿ ನೀಡಿದರು. ಈ ವೇಳೆಯಲ್ಲಿ ಮಂಡ್ಯ ಜಿಲ್ಲೆಯ ಮಾನ್ಯ ಲೋಕಸಭಾ ಸದಸ್ಯರಾದ ಕು.ದಿವ್ಯ ಸ್ಪಂದನ ರವರು ಹಾಜರಿದ್ದರು. ನಿರ್ದೇಶಕರು, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ ರವರು ಮಾನ್ಯ ಲೋಕಸಭಾ ಸದಸ್ಯರು, ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಮತ್ತು ಸರ್ಕಾರದ ವೈದ್ಯಕೀಯ ಶಿಕ್ಷಣ ಕಾರ್ಯದರ್ಶಿರವರು ಗಳನ್ನು ಸ್ವಾಗತಿಸಿದರು.

ನಂತರ ನಿರ್ದೇಶಕರು, ಮಿಮ್ಸ್, ಮಂಡ್ಯ ರವರು ಮಾನ್ಯ ಲೋಕಸಭಾ ಸದಸ್ಯರು, ಮಾನ್ಯ ಸಚಿವರು ಮತ್ತು ಕಾರ್ಯದರ್ಶಿರವರಿಗೆ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬಗ್ಗೆ, ಕಾರ್ಯಚಟುವಟಿಕೆಗಳ ಬಗ್ಗೆ, ಅಭಿವೃದ್ಧಿ ಕಾರ್ಯಗಳು, ಸಂಸ್ಥೆಯಲ್ಲಿ ಪ್ರಾರಂಭಿಸಿರುವ ಕೋರ್ಸುಗಳು, ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ಹಾಗೂ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು, ಎಸ್‌ಸಿ./ಎಸ್‌ಟಿ ರೋಗಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು, ಸರ್ಕಾರದ ವಿವಿಧ ಯೋಜನೆಗಳ ಮೂಲಕ ಎಲ್ಲಾ ರೋಗಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ, ಡಯಾಲಿಸಿಸ್ ಬಗ್ಗೆ, ಆಸ್ಪತ್ರೆಯಲ್ಲಿ ದೊರೆಯುತ್ತಿರುವ ಔಷಧಿಗಳ ಬಗ್ಗೆ ಎಲ್ಲಾ ವಿವರಗಳನ್ನು ವಿವರವಾಗಿ ತಿಳಿಸಿ ಸಂಸ್ಥೆಯ ಕೆಲವು ಅಗತ್ಯ ವಿಚಾರಗಳನ್ನು ಚರ್ಚಿಸಿದರು. ಈ ಸಂದರ್ಭದಲ್ಲಿ 'ಕಚ್ಚಿಗೆರೆ ಸಿದ್ದೇಗೌಡ ಮತ್ತು ದೇವಮ್ಮ ಪುಟ್ಟಾಚಿ ಸಿದ್ದೇಗೌಡ ಟ್ರಸ್ಟ್' ರವರು ಸಂಸ್ಥೆಯ ಬೋಧಕ ಆಸ್ಪತ್ರೆಗೆ ಒಂದು ಡಯಾಲಿಸಿಸ್ ವಾರ್ಡ್‌ನ್ನು 40 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಿಸಿಕೊಡುತ್ತಿದ್ದು, ಇಲ್ಲಿಗೆ ಡಯಾಲಿಸಿಸ್ ಯಂತ್ರಗಳ ಅವಶ್ಯಕತೆ ಇದೆಯೆಂದು ತಿಳಿಸಲಾಗಿ, ಮಾನ್ಯ ಲೋಕಸಭಾ ಸದಸ್ಯರು ತಮ್ಮ ಲೋಕಸಭಾ ನಿಧಿಯಿಂದ ಒಂದು ಡಯಾಲಿಸಿಸ್ ಯಂತ್ರವನ್ನು ಸಂಸ್ಥೆಗೆ ನೀಡುವುದಾಗಿ ತಿಳಿಸಿದರು.

ನಂತರ ಮಾನ್ಯ ಸಚಿವರು ಮತ್ತು ಕಾರ್ಯದರ್ಶಿಗಳು ಸಂಸ್ಥೆಯ ಎಲ್ಲಾ ವಿಭಾಗಗಳಿಗೂ ಭೇಟಿ ನೀಡಿ ಮಾಹಿತಿ ಪಡೆದರು. ಬೋಧಕ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಡ್ರಗ್ಸ್ ಮಳಿಗೆ, ಡಯಾಲಿಸಿಸ್ ಕೇಂದ್ರ ವಾರ್ಡುಗಳು, ಓಪಿಡಿಗಳಿಗೆ ಭೇಟಿ ನೀಡಿ ಅಲ್ಲಿ ರೋಗಿಗಳಿಗೆ ದೊರಕುತ್ತಿರುವ ಸೌಲಭ್ಯಗಳ ಬಗ್ಗೆ, ಸ್ವತಃ ರೋಗಿಗಳನ್ನೇ ವಿಚಾರಿಸಿ ಅವರಿಗೆ ನೀಡುತ್ತಿರುವ ಚಿಕಿತ್ಸೆ, ಔಷದೋಪಚಾರಗಳ ಬಗ್ಗೆ ಮಾಹಿತಿ ಪಡೆದರು.

ನಂತರ ಸಂಸ್ಥೆಯ ಎಲ್ಲಾ ಬೋಧಕ ವೈದ್ಯರ ಸಭೆಯನ್ನು ಕರೆದು ಎಲ್ಲ ಬೋಧಕ ವೈದ್ಯರಿಗೂ ಸಂಸ್ಥೆಯ ಸ್ಥಾಪನೆಯ ಉದ್ದೇಶವನ್ನು ತಿಳಿಸಿ, ಬೋಧಕ ಅಸ್ಪತ್ರೆಗೆ ಬರುವಂತಹ ರೋಗಿಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಬೇಕೆಂದು ಸೂಚಿಸಿದರು. ಸಂಸ್ಥೆಗೆ ಸೇರುವಂತಹವರು ಮೆರಿಟ್ ವಿದ್ಯಾರ್ಥಿಗಳಾಗಿದ್ದು ಅವರುಗಳನ್ನು ಉತ್ತಮ ವೈದ್ಯರನ್ನಾಗಿ ರೂಪಿಸಬೇಕಾಗಿರುತ್ತದೆ ಎಂದು ತಿಳಿಸಿ ತಮ್ಮ ತಮ್ಮ ಕೆಲಸಗಳನ್ನು ಶ್ರದ್ಧೆಯಿಂದ ನಿರ್ವಹಿಸುವಂತೆ ಸೂಚಿಸಿ ಹಿತವಚನಗಳನ್ನು ನುಡಿದರು. ನಂತರ ಬೋಧಕ ವೈದ್ಯರ ಅಭಿಪ್ರಾಯಗಳನ್ನು ಕೇಳಿ ಅವುಗಳಿಗೆ ಪರಿಹಾರ ದೊರಕಿಸುವುದಾಗಿ ತಿಳಿಸಿದರು.

ಮಾನ್ಯ ಸಚಿವರು; ಲೋಕಸಭಾ ಸದಸ್ಯರು, ಕಾರ್ಯದರ್ಶಿಗಳು ಮತ್ತು ಮಿಮ್ಸ್ ನಿರ್ದೇಶಕರ ಜೊತೆ ಸಂಸ್ಥೆಯ ಅಭಿವೃದ್ಧಿಯ ಬಗ್ಗೆ ಚರ್ಚಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ನಿರ್ದೇಶಕರು,
ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ,
ಮಂಡ್ಯ.